364

# ಕರ್ನಾಟಕ ಸರ್ಕಾರ

ಸಂ:ಮಮಇ 11 ಮಮಅ 2013

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:24.01.2013

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ,
ಬೆಂಗಳೂರು.

LPO No 2006

ಕಾರ್ಯಾಲಯ
05 FEB 2013

ಇವರಿಗೆ:
ಜಿಲ್ಲಾಧಿಕಾರಿಗಳು ಮತ್ತು
ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು
ಎಲ್ಲಾ 30 ಜಿಲ್ಲೆಗಳು

ಮಾನ್ಯರೆ,

**ವಿಷಯ:** ಬಾಲ್ಯವಿವಾಹ ತಡೆ ಕುರಿತು ಜಸ್ಟಿಸ್ ಶಿವರಾಜ್ ವಿ. ಪಾಟೀಲ್ ಇವರು ಸಲ್ಲಿಸಿರುವ ವರದಿಯ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸುವ ಕುರಿತು..

~ ~ ~

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಜಸ್ಟಿಸ್ ಶಿವರಾಜ್ ವಿ. ಪಾಟೀಲ್ ಅವರ ಅಧ್ಯಕ್ಷತೆಯಲ್ಲಿ ರಾಜ್ಯ ಹೈಕೋರ್ಟ್ ರಚಿಸಿದ್ದ ಸಮಿತಿಯು ಬಾಲ್ಯವಿವಾಹ ತಡೆ ಕುರಿತು ವರದಿಯನ್ನು ಸಲ್ಲಿಸಿದ್ದು, ಸದರಿ ವರದಿಯಲ್ಲಿ ಮಾಡಲಾದ ಶಿಫಾರಸ್ಸುಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕಾಗಿರುವುದು, ನಮ್ಮ ನಿಮ್ಮೆಲ್ಲರ ಕರ್ತವ್ಯವಾಗಿರುತ್ತದೆ.

ಸರ್ಕಾರದ ಅಧಿಸೂಚನೆ ಸಂಖ್ಯೆ:WCD 377 SWW 2004 ದಿನಾಂಕ:02.05.2008 ಮತ್ತು ಸಂಖ್ಯೆ:WCD 171 SWW 2011 ದಿನಾಂಕ:16.11.2011ರನ್ವಯ ಎಲ್ಲಾ ಜಿಲ್ಲಾಧಿಕಾರಿಗಳನ್ನು ಮತ್ತು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾಗಳನ್ನು ಜಿಲ್ಲಾ ಮಟ್ಟದ ಬಾಲ್ಯವಿವಾಹ ನಿಷೇಧಾಧಿಕಾರಿಗಳಾಗಿ ನೇಮಿಸಲಾಗಿದೆ ಇತರೆ ಇಲಾಖೆಗಳ ಜಿಲ್ಲಾ, ತಾಲ್ಲೂಕು ಮತ್ತು ಗ್ರಾಮ ಪಂಚಾಯತ್ ಮಟ್ಟದ ಅಧಿಕಾರಿಗಳನ್ನು ಬಾಲ್ಯವಿವಾಹ ನಿಷೇಧಾಧಿಕಾರಿಗಳೆಂದು ನೇಮಿಸಲಾಗಿದೆ (ಅಧಿಸೂಚನೆಗಳ ಪ್ರತಿಗಳನ್ನು ಪತ್ರದೊಂದಿಗೆ ಲಗತ್ತಿಸಿದೆ).

ಕೋರ್ ಕಮಿಟಿಯ ವರದಿಯ ಶಿಫಾರಸ್ಸನ್ನು ಅನುಷ್ಠಾನಗೊಳಿಸಲು ಎಲ್ಲಾ ಇಲಾಖೆಗಳ ಸಹಕಾರ ಮತ್ತು ಸಮನ್ವಯ ಪಡೆಯಲಾಗುತ್ತಿದೆ ಹಾಗೂ ಬಾಲ್ಯವಿವಾಹವನ್ನು ತಡೆಯುವ ಬಗ್ಗೆ ಕ್ರಮವಹಿಸಲಾಗುತ್ತಿದೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ಬಾಲ್ಯವಿವಾಹದ ನಿಷೇಧದ ಬಗ್ಗೆ ಅರಿವು ಮೂಡಿಸಲು ಈ ಕೆಳಕಂಡಂತೆ ಕ್ರಮವಹಿಸುತ್ತಿದೆ:-

(1) ಬಾಲ್ಯವಿವಾಹ ನಿಷೇಧದ ಬಗ್ಗೆ ರಾಜ್ಯಾದ್ಯಂತ ಫಲಕಗಳನ್ನು ಪ್ರದರ್ಶಿಸಲಾಗಿದೆ.

(2) ಪ್ರಮುಖ ಸ್ಥಳಗಳಲ್ಲಿ ಬಾಲ್ಯವಿವಾಹ ನಿಷೇಧ ಕುರಿತು ಗೋಡೆ ಬರಹಗಳನ್ನು ಬರೆಸಲಾಗಿದೆ.

(3) ಎಲ್ಲಾ ಜಿಲ್ಲೆಗಳಲ್ಲಿ ಬಾಲ್ಯವಿವಾಹ ನಿಷೇಧ ಕುರಿತು ಬೃಹತ್ ಆಂದೋಲನವನ್ನು ಹಮ್ಮಿಕೊಳ್ಳಲಾಗಿದೆ. ಈ ಬೃಹತ್ ಆಂದೋಲನಗಳಲ್ಲಿ ಕರಪತ್ರ, ಸೈಕಲ್‌ಜಾಥಾ, ಬೀದಿ ನಾಟಕಗಳನ್ನು ಏರ್ಪಡಿಸಲಾಗಿತ್ತು.

2...

(4) ಜಿಲ್ಲೆಗಳ ಪ್ರೌಢ ಶಾಲಾ ಮತ್ತು ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳಿಗೆ ಬಾಲ್ಯವಿವಾ ನಿಷೇಧದ ಕುರಿತು ಭಾಷಣ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ.

(5) ಜಿಲ್ಲಾ ಮಟ್ಟದ 30 ಜಿಲ್ಲೆಗಳ ಬಾಲ್ಯವಿವಾಹ ನಿಷೇಧಾಧಿಕಾರಿಗಳಿಗೆ ಬೆಂಗಳೂರಿನಲ್ಲಿ ಒಂದು ದಿನದ ಕಾರ್ಯಾಗಾರವನ್ನು ನಡೆಸಲಾಗಿರುತ್ತದೆ.

(6) ಎಲ್ಲಾ ಜಿಲ್ಲೆಗಳ ತಾಲ್ಲೂಕು ಮಟ್ಟದ ಬಾಲ್ಯವಿವಾಹ ನಿಷೇಧಾಧಕಾರಿಗಳಿಗೆ ಒಂದು ದಿನದ ತರಬೇತಿ ನೀಡುವ ಬಗ್ಗೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

(7) ಬಾಲ್ಯವಿವಾಹ ನಿಷೇಧ ಕುರಿತು ಆಕಾಶವಾಣಿಯಲ್ಲಿ ಜೀವನ ಮಲ್ಲಿಗೆ ಅರಳಲಿ ಮೆಲ್ಲಗೆ ಕಾರ್ಯಕ್ರಮ ವನ್ನು ಪ್ರತಿ ಶುಕ್ರವಾರ ಬೆಳಿಗ್ಗೆ 7-15 ರಿಂದ 7-30 ರವರೆಗೆ ಮತ್ತು ಪ್ರತಿ ಶನಿವಾರ ಎಫ್.ಎಂ.ರೆಬೋದಲ್ಲಿ ಬೆಳಿಗ್ಗೆ 8-15 ರಿಂದ 9-00 ಗಂಟೆಯವರೆಗೆ ಪ್ರಸಾರವಾಗುತ್ತಿದೆ.

(8) ಬಾಲ್ಯವಿವಾಹ ನಿಷೇಧ ಕುರಿತು ಭಿತ್ತಿಪತ್ರಗಳು, ಕಿರುಹೊತ್ತಿಗೆಗಳು, ಸಾಮಾನ್ಯವಾಗಿ ಕೇಳುವ ಪ್ರಶ್ನೆಗಳ ಪುಸ್ತಕಗಳನ್ನು ತಯಾರಿಸಿ ವಿತರಿಸಲಾಗಿದೆ.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ಎಲ್ಲಾ ಇಲಾಖೆಗಳ ಸಹಕಾರದೊಂದಿಗೆ ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದರೂ ಸಹ ಜಿಲ್ಲೆಗಳಲ್ಲಿ ಬಾಲ್ಯವಿವಾಹ ನಡೆಯುತ್ತಿರುವ ಬಗ್ಗೆ ದೂರುಗಳು ಬರುತ್ತಿರುವುದು ಕಂಡು ಬಂದಿದೆ. ಬಾಲ್ಯವಿವಾಹವನ್ನು ತಡೆಯುವಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳನ್ನು ಹೊರತುಪಡಿಸಿ, ಇತ್ತರೆ ಇಲಾಖೆಯ ಬಾಲ್ಯವಿವಾಹ ನಿಷೇಧಾಧಿಕಾರಿಗಳು ಕ್ರಮವಹಿಸುತ್ತಿಲ್ಲದಿರುವುದು ಗಮನಕ್ಕೆ ಬಂದಿದೆ. ಈ ಹಿನ್ನೆಲೆಯಲ್ಲಿ, ತಾವುಗಳು ತಮ್ಮ ಜಿಲ್ಲೆಯ ಎಲ್ಲಾ ಇಲಾಖೆಯ ಬಾಲ್ಯವಿವಾಹ ನಿಷೇಧಾಧಿಕಾರಿಗಳಿಗೆ ಇಲಾಖೆಯ ಜೊತೆ ಸಹಕರಿಸುವಂತೆ ಮತ್ತು ಬಾಲ್ಯ ವಿವಾಹವನ್ನು ತಡೆಗಟ್ಟಲು ಒಟ್ಟಾಗಿ ಎಲ್ಲಾ ಇಲಾಖೆಗಳು ಸಹಕರಿಸಿ, ಸೂಕ್ತ ನಿರ್ದೇಶನವನ್ನು ನೀಡುವಂತೆ ಕೋರುತ್ತೇನೆ.

ತಮ್ಮ ನಂಬುಗೆಯ

(ರಮೇಶ್ ಬಿ. ಝುಳಕಿ)
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ